ಕರ್ನಾಟಕ ಸರ್ಕಾರ
ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012.
Email: commissioner.pue@gmail.com Phone No. 080-23562033

ಸಂಖ್ಯೆ:ಪಪೂಶಿಇ/187/ಸಿಬ್ಬಂದಿ/ಸಿಆರ್-3/ಉನೇ/2015-16(ಹೆಆ) ದಿನಾಂಕ:26-06-2023

## ಜ್ಞಾಪನ

ವಿಷಯ:- ಸರ್ಕಾರಿ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಹೆಚ್ಚುವರಿ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಪ್ರಥಮ ವೇತನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:-1. ಈ ಕಚೇರಿ ಜ್ಞಾಪನ ಸಂಖ್ಯೆ: ಪಪೂಶಿಇ/187/ಸಿಬ್ಬಂದಿ/ಸಿಆರ್-3/ಉನೇ/2015-16(ಹೆಆ), ದಿನಾಂಕ:17-09-2022.
2. ಈ ಕಚೇರಿ ಜ್ಞಾಪನ ಸಂಖ್ಯೆ: ಪಪೂಶಿಇ/187/ಸಿಬ್ಬಂದಿ/ಸಿಆರ್-3/ಉನೇ/2015-16(ಹೆಆ), ದಿನಾಂಕ: 03-02-2023 ಮತ್ತು 13-02-2023.

–*–

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳಿಗೆ ಉಲ್ಲೇಖ-1ರಂತೆ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಸದರಿ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಸಂಬಂಧಿಸಿದ ಪ್ರಾಧಿಕಾರಗಳಿಗೆ ಕಳುಹಿಸಿ, ಅವರಿಂದ ಸ್ವೀಕೃತಗೊಂಡ ನೈಜತೆ ಪ್ರಮಾಣ ಪತ್ರಗಳ ಆಧಾರದ ಮೇಲೆ ಉಲ್ಲೇಖ-2ರ ಎರಡು ದಿನಾಂಕಗಳಲ್ಲಿ ನೇಮಕಾತಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಸ್ಥಳ ನಿಯುಕ್ತಿಗೊಂಡ ಕಾಲೇಜಿನಲ್ಲಿ ನಿಗದಿತ ಅವಧಿಯಲ್ಲಿ ಉಪನ್ಯಾಸಕರಾಗಿ ಕರ್ತವ್ಯದ ಮೇಲೆ ಹಾಜರಾದ ಉಪನ್ಯಾಸಕರಿಗೆ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಪ್ರಥಮ ವೇತನ ಸೆಳೆಯಲು ನೇಮಕಾತಿ ಆದೇಶದಲ್ಲಿನ ಷರತ್ತಿಗೊಳಪಟ್ಟು ಅನುಮತಿ ನೀಡಿದೆ.

ಉಪನ್ಯಾಸಕರ ನೈಜತೆ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಪ್ರಾಂಶುಪಾಲರಿಗೆ ನೇಮಕಾತಿ ಆದೇಶದೊಂದಿಗೆ ಲಗತ್ತಿಸಿ ಕಳುಹಿಸಲಾಗಿದ್ದು, ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರ ಸೇವಾ ಪುಸ್ತಕಗಳಲ್ಲಿ ದೃಢೀಕರಿಸಿ ಲಗತ್ತಿಸಲು ಈ ಮೂಲಕ ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ರವರಿಗೆ:**

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ – ಮಾಹಿತಿಗಾಗಿ.
2. ಸಂಬಂಧಿಸಿದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಿಗೆ – ಅಗತ್ಯ ಕ್ರಮಕ್ಕಾಗಿ.
3. ಕಚೇರಿ/ಹೆಚ್ಚುವರಿ ಪ್ರತಿ.